ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

---

ಸಂಖ್ಯೆ : ವಾಇ : ಜಂ ನಿ : ಸುಮಪ : 2021–22 ದಿನಾಂಕ : 21–10–2021

# ಮಾಧ್ಯಮ ಆಹ್ವಾನ
## MEDIA INVITATION

**SPECIAL MEDIA INVITATION**

The Minister for Home Mr Araga Jnanedra will flag-off the Sudarshan Bharat Parikrama, the Black Cat Car Rally, on October 22 at 9-00 A M at National Military Memorial, next to Indira Gandhi Musical Fountain, opposite to Jawaharlal Nehru Planetarium, in Bengaluru.

The Director General of National Security Guard Mr M A Ganapathy will be present on this occasion.

Media Persons - Correspondents and Camera Persons - representing Electronic and Print Media are requested to kindly attend and give wide coverage to this special programme.

D. P. MURALIDHAR
JOINT DIRECTOR ( NEWS )

**ವಿಶೇಷ ಮಾಧ್ಯಮ ಆಮಂತ್ರಣ**

ಗೃಹ ಸಚಿವ ಶ್ರೀ ಅರಗ ಜ್ಞಾನೇಂದ್ರ ಅವರು ಅಕ್ಟೋಬರ್ 22 ರಂದು ಬೆಳಿಗ್ಗೆ 9-00 ಗಂಟೆಗೆ ಬೆಂಗಳೂರಿನ ರಾಷ್ಟ್ರೀಯ ಮಿಲಿಟರಿ ಸ್ಮಾರಕ, ಇಂದಿರಾ ಗಾಂಧಿ ಸಂಗೀತ ಕಾರಂಜಿ ಸಮೀಪ, ಜವಹರಲಾಲ್ ನೆಹರೂ ತಾರಾಲಯದ ಎದುರು, ಇಲ್ಲಿ ಸುದರ್ಶನ ಭಾರತ್ ಪರಿಕ್ರಮ, ಬ್ಲಾಕ್ ಕ್ಯಾಟ್ ಕಾರ್ ರ್ಯಾಲಿಗೆ ಚಾಲನೆ ನೀಡಲಿದ್ದಾರೆ.

ನ್ಯಾಷನಲ್ ಸೆಕ್ಯೂರಿಟಿ ಗಾರ್ಡ್ನ ಮಹಾ ನಿರ್ದೇಶಕ ಶ್ರೀ ಎಂ. ಎ. ಗಣಪತಿ ಅವರು ಈ ಸಂದರ್ಭದಲ್ಲಿ ಹಾಜರಿರುತ್ತಾರೆ.

ವಿದ್ಯುನ್ಮಾನ ಹಾಗೂ ಮುದ್ರಣ ಮಾಧ್ಯಮದ ಬಾತ್ಮೀದಾರರು ಹಾಗೂ ಛಾಯಾಚಿತ್ರೀಕರಣಗಾರರು ಭಾಗವಹಿಸಿ, ಈ ಕಾರ್ಯಕ್ರಮಕ್ಕೆ ವ್ಯಾಪಕ ಪ್ರಚಾರ ದೊರಕಿಸಿ ಕೊಡಲು ಕೋರಲಾಗಿದೆ.

ಡಿ. ಪಿ. ಮುರಳೀಧರ್
ಜಂಟಿ ನಿರ್ದೇಶಕರು ( ಸುದ್ದಿ)

# ಪತ್ರಿಕಾ ಪ್ರಕಟಣೆ

**PRESS RELEASE**

ರಕ್ಷಣಾ ಉತ್ಪನ್ನಗಳ ರಫ್ತಿಗೆ ಉತ್ತೇಜನ: ಕೇಂದ್ರ ರಕ್ಷಣಾ ಸಚಿವ ರಾಜನಾಥ್ ಸಿಂಗ್

**ಬೆಂಗಳೂರು, ಅಕ್ಟೋಬರ್ 21, 2021(ಕರ್ನಾಟಕ ವಾರ್ತೆ):**

**2025 ನೇ ಇಸವಿಯ ವೇಳೆಗೆ ದೇಶವು 35,000 ಕೋಟಿ ರೂಗಳ ರಕ್ಷಣಾ ಉತ್ಪನ್ನಗಳ ರಫ್ತು ಮಾಡುವ ಗುರಿಯನ್ನು ಹೊಂದಿದೆ ಎಂದು ಕೇಂದ್ರ ರಕ್ಷಣಾ ಸಚಿವರಾದ ರಾಜ್‌ನಾಥ್ ಸಿಂಗ್ ತಿಳಿಸಿದರು.**

ಬೆಂಗಳೂರಿಗೆ ಎರಡು ದಿನಗಳ ಭೇಟಿಗಾಗಿ ಆಗಮಿಸಿರುವ ಅವರು ಇಂದು ಹೋಟೆಲ್ ತಾಜ್ ವೆಸ್ಟೆಂಡ್‌ನಲ್ಲಿ ಆಯೋಜಿಸಲಾಗಿದ್ದ ರಕ್ಷಣಾ ಇಲಾಖೆಯ ಪರಾಮರ್ಶನ ಸಮಿತಿಯ ಪ್ರಗತಿ ಪರಿಶೀಲನಾ ಸಭೆಯಲ್ಲಿ ಪಾಲ್ಗೊಂಡು ಮಾತನಾಡುತ್ತಾ, ರಕ್ಷಣಾ ಇಲಾಖೆಯು ಮಾರುಕಟ್ಟೆ ವಿಸ್ತರಣೆ, ಉದ್ಯೋಗ ಸೃಷ್ಠಿ, ಜಾಗತಿಕ ವಾಣಿಜ್ಯ ಬೇಡಿಕೆಗಳ ಬಗ್ಗೆ ಗಮನ ಹರಿಸಿದೆ. ಇಂದಿನ ಸ್ಪರ್ಧಾತ್ಮಕ ಜಗತ್ತಿನಲ್ಲಿ ಗುಣಮಟ್ಟ ಕಾಯ್ದುಕೊಂಡು ಉತ್ಪನ್ನಗಳನ್ನು ದೇಶೀಯವಾಗಿ ಹಾಗೂ ಇತರ ದೇಶಗಳಿಗೆ ತಲುಪಿಸುವ ನಿಟ್ಟಿನಲ್ಲಿ ಕಾರ್ಯಮುಖವಾಗಿದೆ. ರಫ್ತು ಪರವಾನಗಿ ನೀಡಿಕೆ, ಆನ್‌ಲೈನ್ ಸಮಾಲೋಚನೆ, ತಂತ್ರಜ್ಞಾನದ ವಿನೂತನ ಬಳಕೆಯಿಂದ ಇಲಾಖೆಯು ರಕ್ಷಣಾ ವಸ್ತುಗಳ ಬೇಡಿಕೆಗೆ ಧಕ್ಕೆ ಬಾರದ ರೀತಿಯಲ್ಲಿ ಮುನ್ನಡೆಯುತ್ತಿದೆ ಎಂದರು.

ರಕ್ಷಣಾ ಉತ್ಪನ್ನಗಳನ್ನು ಜಾಗತಿಕ ಬೇಡಿಕೆಗೆ ಅನುಸಾರವಾಗಿ ವಿನ್ಯಾಸಗೊಳಿಸುವುದರ ಜೊತೆಗೆ ಖಾಸಗಿ ಹಾಗೂ ಸಾರ್ವಜನಿಕ ವಲಯಗಳಲ್ಲೂ ಇದನ್ನು ಹೆಚ್ಚು ಅಭಿವೃದ್ಧಿ ಪಡಿಸಲಾಗಿದೆ. ರಕ್ಷಣಾ ತೆರಿಗೆ ಪಾವತಿ (ಡಿಡಿಪಿ) ಗೆ ಸಹ ಇಲಾಖೆ ಒತ್ತು ನೀಡಿದ್ದು, ಈ ಬಗ್ಗೆ ಇಲಾಖೆ ಹಿರಿಯ ಅಧಿಕಾರಿಗಳು ಮಾಹಿತಿ ನೀಡಿದರು

ರಕ್ಷಣಾ ವಸ್ತುಗಳ ರಫ್ತಿನಲ್ಲಿ ಭಾರತ ವಿಶ್ವದ ಮೊದಲ 25 ದೇಶಗಳಲ್ಲಿ ಸ್ಥಾನ ಪಡೆದಿದೆ. ಅಮೇರಿಕ, ಇಸ್ರೇಲ್, ಸೇರಿದಂತೆ ಸುಮಾರು 84 ದೇಶಗಳಲ್ಲಿ ಭಾರತ ತನ್ನ ಉತ್ಪನ್ನಗಳನ್ನು ರಫ್ತು ಮಾಡುತ್ತಿದೆ. ಬುಲೆಟ್ ಪ್ರೂಫ್ ಹೆಲ್ಮೆಟ್, ಎಲೆಕ್ಟ್ರಾನಿಕ್ ಉತ್ಪನ್ನ ಹಾಗೂ ಆಟೋಮೊಬೈಲ್ ಇತ್ಯಾದಿಗಳಿಗೆ ಬಹಳ ಬೇಡಿಕೆಯಿದೆ. ಮೇಕ್ ಇನ್ ಇಂಡಿಯಾ ಅಡಿಯಲ್ಲಿ 375 ಒಡಂಬಡಿಕೆ ಯೋಜನೆಗಳಿಗೆ ಸಹಿ ಹಾಕಲಾಗಿದೆ. ಪ್ರತಿ ವರ್ಷ ರಕ್ಷಣಾ ಎಕ್ಸ್‌ಪೋ ಹಾಗೂ ಏರೋ ಇಂಡಿಯಾ ಶೋ ಅನ್ನು ಇಲಾಖೆ ಯಶಸ್ವಿಯಾಗಿ ನಡೆಸಿಕೊಂಡು ಬರುತ್ತಿದೆ. ಹಿಂದೂಸ್ತಾನ್ ಏರೋನಾಟಿಕ್ಸ್ ಲಿಮಿಟೆಡ್, ಭಾರತ್ ಎಲೆಕ್ಟ್ರಿಕಲ್ಸ್ ಲಿಮಿಟೆಡ್, ಡಿಆರ್‌ಡಿಓ ಗಳಿಗೆ ಹೆಚ್ಚು ಪ್ರೋತ್ಸಾಹ ನೀಡುತ್ತಿದೆ. ಈ ಕಂಪೆನಿಗಳು ಗುಣಮಟ್ಟಕ್ಕೆ ಸಹ ಹೆಸರು ಪಡೆದಿದೆ. ಹೊಸ ಸ್ಟಾರ್ಟ್ ಅಪ್ ಕಂಪೆನಿಗಳಿಗೆ ಸಹ ಇಲಾಖೆ ಪ್ರೋತ್ಸಾಹ ನೀಡುತ್ತಿದೆ ಎಂದರು

ರಾಜ್ಯ ಸಭೆಯ ವಿರೋಧ ಪಕ್ಷದ ನಾಯಕರಾದ ಮಲ್ಲಿಕಾರ್ಜುನ ಖರ್ಗೆ ಮಾತನಾಡಿ, ಸಾರ್ವಜನಿಕ ಉದ್ದಿಮೆಗಳನ್ನು ಉತ್ತೇಜಿಸಿ ಪ್ರೋತ್ಸಾಹಿಸುವುದು ಬಹಳ ಮುಖ್ಯ. ಇದರಿಂದ ರಫ್ತಿನ ಪ್ರಮಾಣ ಹೆಚ್ಚಳವಾಗಿ ದೇಶ ಮುನ್ನಡೆಯುತ್ತದೆ ಎಂದರು

ಸಭೆಯಲ್ಲಿ ಕೇಂದ್ರ ರಕ್ಷಣಾ ಕಾರ್ಯದರ್ಶಿಗಳಾದ ಅಜಯ್ ಕುಮಾರ್, ಅಪರ ಕಾರ್ಯದರ್ಶಿಗಳಾದ ಸಂಜಯ್ ಜಾಜು, ಇಲಾಖೆಯ ಹಣಕಾಸು ಸಲಹೆಗಾರರಾದ ಸಂಜೀವ್ ಮಿಟ್ಟಲ್ ಹಾಗೂ ಇತರ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

**ಛಾಯಾಚಿತ್ರ ಶೀರ್ಷಿಕೆ :**

ಗೌರವಾನ್ವಿತ ಕೇಂದ್ರ ರಕ್ಷಣಾ ಮಂತ್ರಿಗಳಾದ ರಾಜನಾಥ್ ಸಿಂಗ್ ಅವರು ಎರಡು ದಿನಗಳ ಬೆಂಗಳೂರು ಭೇಟಿಗಾಗಿ (ದಿನಾಂಕ 21-10-2021 ಹಾಗೂ 22-10-2921 ರಂದು) ಇಂದು ಬೆಳಿಗ್ಗೆ 11.40 ಗಂಟೆಗೆ ಬೆಂಗಳೂರಿಗೆ ಆಗಮಿಸಿದರು. ಹೆಚ್.ಎ.ಎಲ್ ವಿಮಾನ ನಿಲ್ದಾಣದಲ್ಲಿ ಹೆಚ್.ಎ.ಎಲ್ ನ ಛೇರ್ಮನ್ ಆರ್. ಮಾಧವನ್ ಅವರು ರಕ್ಷಣಾ ಮಂತ್ರಿಗಳನ್ನು ಆತ್ಮೀಯವಾಗಿ ಬರಮಾಡಿಕೊಂಡರು. ಈ ಸಮಯದಲ್ಲಿ ಹಿರಿಯ ಅಧಿಕಾರಿಗಳು ಉಪಸ್ಥಿತರಿದ್ದರು.

**ಮನೆ ಮನೆಗೆ ತೆರಳಿ ಕೊರೋನಾ ಲಸಿಕೆ ಹಾಕುವಂತೆ ನಿರ್ದೇಶನ**

**– ಮುಖ್ಯ ಕಾರ್ಯದರ್ಶಿ ಪಿ. ರವಿಕುಮಾರ್**

**ಬೆಂಗಳೂರು, ಅಕ್ಟೋಬರ್ 21, 2021(ಕರ್ನಾಟಕ ವಾರ್ತೆ):**

ಮನೆ ಮನೆಗೆ ತೆರಳಿ ಅರ್ಹರಿಗೆ ಕೊರೋನಾ ಲಸಿಕೆ ಹಾಕುವಂತೆ ಸಕಾರದ ಮುಖ್ಯ ಕಾರ್ಯದರ್ಶಿ ಪಿ. ರವಿಕುಮಾರ್ ಅವರು ಎಲ್ಲಾ ಜಿಲ್ಲಾಧಿಕಾರಿಗಳಿಗೆ ನಿರ್ದೇಶನ ನೀಡಿದರು.

ವಿಧಾನಸೌಧದ ಸಮಿತಿ ಕೊಠಡಿಯಲ್ಲಿ ಇಂದು ಏರ್ಪಡಿಸಿದ್ದ ಆರೋಗ್ಯ ಇಲಾಖೆಯ ಪ್ರಗತಿ ಪರಿಶೀಲನೆ ಹಾಗೂ ರಾಜ್ಯದ ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕರುಗಳ ಜೊತೆ ವಿಡಿಯೋ ಕಾನ್ಪರೆನ್ಸ್ ಮೂಲಕ ಸಂವಾದ ನಡೆಸಿ ಮಾತನಾಡಿದ ಮುಖ್ಯ ಕಾರ್ಯದರ್ಶಿಗಳು, ಲಸಿಕೆ ಹಾಕುವ ಸಂದರ್ಭದಲ್ಲಿ ನುರಿತ ವೈದ್ಯರು ಹಾಗೂ ವೈದ್ಯಕೀಯ ಸಿಬ್ಬಂದಿಗಳು ಕಡ್ಡಾಯವಾಗಿ ಹಾಜರಿರುವಂತೆ ಮುಂಜಾಗ್ರತೆ ವಹಿಸಲು ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಿದರು.

ಗ್ರಾಮೀಣ ಭಾಗದಲ್ಲಿ ಲಸಿಕೆ ನೀಡುವ ಸಮಯದಲ್ಲಿ ಸ್ಥಳೀಯ ಸಂಘಸಂಸ್ಥೆಗಳು ಹಾಗೂ ಜನಪ್ರತಿನಿಧಿಗಳ ಸಹಕಾರ ಪಡೆದು ಜನರಲ್ಲಿ ಅರಿವು ಮೂಡಿಸಿ ಲಸಿಕಾ ಕಾರ್ಯಕ್ರಮವನ್ನು ಯಶಸ್ವಿಗೊಳಿಸಬೇಕು ಎಂದು ತಿಳಿಸಿದರು. ನಗರ ಪ್ರದೇಶಗಳಲ್ಲಿ ನಗರ ಸ್ಥಳೀಯ ಸಂಸ್ಥೆಗಳ ಸಹಕಾರದೊಂದಿಗೆ ಲಸಿಕೆ ಹಾಕುವಲ್ಲಿ ವೈದ್ಯಕೀಯ ತಂಡ ಮುಂದಾಗಬೇಕು ಎಂದು ತಿಳಿಸಿದರು.

ಮೈಸೂರು, ಕಲಬುರಗಿ ಸೇರಿದಂತೆ ಲಸಿಕಾ ಕಾರ್ಯಕ್ರಮದಲ್ಲಿ ಹಿಂದುಳಿದಿರುವ ಕೆಲವು ಜಿಲ್ಲೆಗಳು ಲಸಿಕಾ ಪ್ರಮಾಣ ಇನ್ನಷ್ಟು ಹೆಚ್ಚಿಸಲು ಆಸಕ್ತಿ ವಹಿಸುವಂತೆ ಜಿಲ್ಲಾಧಿಕಾರಿಗಳಿಗೆ ಸಲಹೆ ನೀಡಿದರು. ಗ್ರಾಮೀಣ ಭಾಗದಲ್ಲಿ ಲಸಿಕೆ ಹಾಕುವಾಗ ನಿರ್ದಿಷ್ಟ ಕ್ರಿಯಾ ಯೋಜನೆ ರೂಪಿಸಿಕೊಂಡು ಪ್ರತಿಯೊಬ್ಬರಿಗೂ, ಅರ್ಹ ಫಲಾನುಭವಿಗಳಿಗೆ ಲಸಿಕೆ ಹಾಕುವಂತೆ ಅಧಿಕಾರಿಗಳು ಕ್ರಮ ಜರುಗಿಸಬೇಕು ಹಾಗೂ ರಾಜ್ಯದಲ್ಲಿ ವಿಶೇಷ ಆಸಕ್ತಿ ವಹಿಸಿ ಲಸಿಕಾ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಸೂಚಿಸಿದರು.

ಸರ್ಕಾರದ ಅಪರ ಮುಖ್ಯಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರಾದ ಶ್ರೀಮತಿ ವಂದಿತಾ ಶರ್ಮಾ ಅವರು ಮಾತನಾಡುತ್ತಾ, ಮುಂದಿನ ಎರಡು ವಾರಗಳಲ್ಲಿ ರಾಜ್ಯದಲ್ಲಿ ಲಸಿಕೆ ಹಾಕುವ ಪ್ರಮಾಣವನ್ನು ಇನ್ನಷ್ಟು ಹೆಚ್ಚು ಮಾಡಬೇಕು ಎಂದು ಅವರು ಎಲ್ಲಾ ಅಧಿಕಾರಿಗಳಿಗೆ ಸೂಚಿಸಿದರು.

ಜನರಲ್ಲಿ ಇನ್ನಷ್ಟು ಜಾಗೃತಿ ಮೂಡಿಸಲು ಆರೋಗ್ಯ ಇಲಾಖೆಯ ಅಧಿಕಾರಿಗಳು ಶ್ರಮ ವಹಿಸಿ ಕೆಲಸ ಮಾಡಬೇಕು ಹಾಗೂ ಮುದ್ರಣ ಮತ್ತು ದೃಶ್ಯ ಮಾಧ್ಯಮಗಳಲ್ಲಿ ಕೊರೋನಾ ಲಸಿಕೆ ಬಗ್ಗೆ ಹೆಚ್ಚು ಪ್ರಚಾರ ನೀಡಲು ಕ್ರಮ ವಹಿಸುವುದು. ಕೊರೋನಾ ಲಸಿಕೆಯನ್ನು ಹೆಚ್ಚಿನ ಪ್ರಮಾಣದಲ್ಲಿ ರಾಜ್ಯದಲ್ಲಿ ಹಾಕುವ ಮೂಲಕ ಕೊರೋನಾ ಪ್ರಮಾಣವನ್ನು ಹೆಚ್ಚಾಗದಂತೆ ನೋಡಿಕೊಳ್ಳುವ ಜವಬ್ದಾರಿ ಅಧಿಕಾರಿಗಳ ಮೇಲಿದೆ ಎಂದು ತಿಳಿಸಿದರು.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಪ್ರಧಾನ ಕಾರ್ಯದರ್ಶಿ ಅನಿಕುಮಾರ್, ಆಯುಕ್ತರಾದ ರಣದೀಪ್ ಹಾಗೂ ರಾಷ್ಟ್ರೀಯ ಆರೋಗ್ಯ ಮಿಷನ್ ನಿರ್ದೇಶಕಿ ಶ್ರೀಮತಿ ಅರುಂಧತಿ, ಮತ್ತು ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಅಧಿಕಾರಿಗಳು ಸಭೆಯಲ್ಲಿ ಉಪಸ್ಥಿತರಿದ್ದರು.

**ಸಚಿವರ ಪ್ರವಾಸ**

**ಬೆಂಗಳೂರು, ಅಕ್ಟೋಬರ್ 21, 2021(ಕರ್ನಾಟಕ ವಾರ್ತೆ):**

**ಮಾನ್ಯ ವಸತಿ ಹಾಗೂ ಮೂಲಸೌಲಭ್ಯ ಅಭಿವೃದ್ಧಿ ಸಚಿವ ವಿ. ಸೋಮಣ್ಣ ಅವರು ಅಕ್ಟೋಬರ್ 22 ರಂದು ವಿಜಯಪುರ ಹಾಗೂ ರಾಜ್ಯದ ಹೊರ ಜಿಲ್ಲೆಗಳಲ್ಲಿ ಪ್ರವಾಸ ಕೈಗೊಳ್ಳಲಿರುವರು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.**

**ನಗರದಾದ್ಯಂತ ಸಂಚರಿಸುವ ಬಿ.ಎಂ.ಟಿ.ಸಿ ಬಸ್ಸುಗಳ ತಪಾಸಣೆ**

**ಬೆಂಗಳೂರು, ಅಕ್ಟೋಬರ್ 21, 2021(ಕರ್ನಾಟಕ ವಾರ್ತೆ):**

ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ ವಾಹನಗಳಲ್ಲಿ ಸಂಚರಿಸುವ ಪ್ರಯಾಣಿಕರು ಟಿಕೇಟನ್ನು ಪಡೆಯದೆ ಅನಧಿಕೃತವಾಗಿ ಪ್ರಯಾಣ ಮಾಡುವವರನ್ನು ಮತ್ತು ಸಂಸ್ಥೆಯ ಸಾರಿಗೆ ಆದಾಯದ ಸೋರಿಕೆಯನ್ನು ತಡೆಗಟ್ಟುವ ನಿಟ್ಟನಲ್ಲಿ, ನಗರದಾದ್ಯಂತ ಸಂಚರಿಸುವ ವಾಹನಗಳನ್ನು ನಮ್ಮ ಸಂಸ್ಥೆಯ ತನಿಖಾ ತಂಡಗಳು ಸೆಪ್ಟೆಂಬರ್–2021 ರ ಮಾಹೆಯಲ್ಲಿ ಒಟ್ಟು **15,576** ಟ್ರಿಪ್‌ಗಳನ್ನು ತಪಾಸಿಸಿ **2209** ಟಿಕೇಟ್ ರಹಿತ ಪ್ರಯಾಣಿಕರನ್ನು ಪತ್ತೆ ಹಚ್ಚಿ, ಅವರಿಂದ ಒಟ್ಟು ರೂ. **3,45,660/–** ದಂಡ ವಸೂಲಿ ಮಾಡಿ ಸಂಸ್ಥೆಯ ನಿರ್ವಾಹಕರ ವಿರುದ್ಧ **1455** ಪ್ರಕರಣಗಳನ್ನು ದಾಖಲಿಸಿರುತ್ತಾರೆ.

ಮಹಿಳಾ ಪ್ರಯಾಣಿಕರಿಗೆಂದೇ ಮೀಸಲಾಗಿರುವ ಆಸನಗಳಲ್ಲಿ ಕುಳಿತು ಪ್ರಯಾಣಿಸಿರುವ **189** ಪುರುಷ ಪ್ರಯಾಣಿಕರಿಂದ ಒಟ್ಟು ರೂ. **18900/–**ನ್ನು ಮೋಟಾರು ವಾಹನ ಕಾಯ್ದೆ 1988ರ ಕಾಲಂ 177 ಮತ್ತು 94 ರ ಪ್ರಕಾರ ದಂಡ ವಿಧಿಸಲಾಗಿರುತ್ತದೆ.

ಒಟ್ಟಾರೆಯಾಗಿ ಸೆಪ್ಟೆಂಬರ್–2021 ರ ಮಾಹೆಯಲ್ಲಿ **2398** ಪ್ರಯಾಣಿಕರಿಂದ ಒಟ್ಟು ರೂ **3,64,560/–** ದಂಡವನ್ನು ವಸೂಲಿ ಮಾಡಲಾಗಿದೆ.

ಪ್ರಯಾಣಿಕರು ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ ವಾಹನಗಳಲ್ಲಿ ಪ್ರಯಾಣಿಸುವಾಗ ಅಧಿಕೃತ ಟಿಕೇಟ್ / ದಿನದ ಪಾಸು / ಮಾಸಿಕ ಪಾಸುಗಳನ್ನು ಹೊಂದಿ ಪ್ರಯಾಣಿಸುವುದು. ಇದರಿಂದ ಅನಗತ್ಯ ದಂಡ ಕಟ್ಟುವುದನ್ನು ತಡೆಯಬಹುದಾಗಿದೆ ಹಾಗೂ ಇಂತಹ ಪ್ರವೃತ್ತಿಯಿಂದ ಸಂಸ್ಥೆಯು ಉತ್ತಮ ಸೇವೆಯನ್ನು ಪ್ರಯಾಣಿಕರಿಗೆ ನೀಡಲು ಸಹಾಯವಾಗುತ್ತದೆ. ಮಹಿಳಾ ಪ್ರಯಾಣಿಕರಿಗೆಂದೇ ಮೀಸಲಾಗಿರುವ ಆಸನಗಳಲ್ಲಿ ಪುರುಷ ಪ್ರಯಾಣಿಕರು ಆಸನಗಳನ್ನು ತೆರವು ಮಾಡಿಕೊಡುವ ಮೂಲಕ ಅವರಿಗೆ ಕುಳಿತುಕೊಳ್ಳಲು ಅವಕಾಶ ನೀಡಬೇಕೆಂದು ಅಧಿಕೃತ ಪ್ರಕಟಣೆ ತಿಳಿಸಿದೆ.

**Intensified checking of BMTC buses operated in and around Bangalore City**

Bengaluru, October 21 (Karnataka Information) :

The Checking staff of Bangalore Metropolitan Transport Corporation has intensified checking of buses operated in and around Bangalore City to detect ticketless travelling by the passengers. During the Month of **September-2021** our staff

had checked **15,576** trips and penalized **2209** ticketless passengers by collecting Rs **3,45,660/-** as penalty and booked **1455** cases against conductor's for their dereliction of duty.

During the aforesaid period the Checking had penalized **189** male passengers occupying seats exclusively reserved for lady passengers & imposed fine of **Rs. 18900/-** in accordance with KMV Rules 94 r/w section 177 of MV Act 1988.

During the Month of September-2021 overall RS**. 3,64,560/-** Penalty from **2398** penalized passengers was collected.

Passengers are advised to purchase tickets / pass and travel- this will not only avoid levy of penalty / embarrassment but will also help BMTC to give better services to all commuters. Kindly allow the female passengers to occupy the seats exclusively reserved for them .